# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** **ಶ್ರೀ ಈಶ್ವರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಊರುಕೆರೆ ಗ್ರಾಮ ಪಂಚಾಯಿತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.**

**ಓದಲಾಗಿದೆ:**
1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ–2348/2016/ಎಆರ್‌ಎಲ್‌ಓ–2, ದಿನಾಂಕ: 09–05–2017.
2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ ಬಿಡಿ–2348/2016/ಸನಿಕಾಸ–2, ದಿನಾಂಕ: 11–04–2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 11.04.2017 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ. ಮಾನ್ಯ ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ತುಮಕೂರು ಲೋಕಾಯುಕ್ತ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರ (ಇನ್ನು ಮುಂದೆ ದೂರುದಾರರು ರಂದು ಕರೆಯಲ್ಪಡುತ್ತಾರೆ) ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳೊಂದಿಗೆ ಸಲ್ಲಿಸಿದ ವರದಿಯಲ್ಲಿ ಶ್ರೀ ಈಶ್ವರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಉರುಕೆರೆ ಗ್ರಾಮ ಪಂಚಾಯಿತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ, (ಇನ್ನು ಮುಂದೆ ಎದುರುದಾರರು ರಂದು ಕರೆಯಲ್ಪಡುತ್ತಾರೆ) ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ದುರ್ನಡತೆ ತೋರಿಸಿರುವುದಾಗಿ ವರದಿ ಸಲ್ಲಿಸಿದ ಮೇರೆಗೆ, ದಾಖಲೆಗಳನ್ನು ಪರಿಶೀಲಿಸಿದಾಗ, ಎದುರುದಾರರು ದುರ್ನಡತೆ ತೋರಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 9 ರಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

**ದೂರಿನ ಸಂಕ್ಷಿಪ್ತ ವಿವರಣೆ:**

ದೂರುದಾರರು ತಮ್ಮ ದೂರಿನಲ್ಲಿ ತುಮಕೂರು ತಾಲ್ಲೂಕು ಊರುಕೆರೆ ಗ್ರಾಮ ಪಂಚಾಯಿತಿಯಲ್ಲಿ ಎದುರುದಾರರು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ 2011 ರಿಂದ 2013 ನೇ ಸಾಲಿನವರೆಗೆ ಕೆಲಸ ಮಾಡಿದ್ದು ಈ ಅವಧಿಯಲ್ಲಿ ಅಂದರೆ 2012–13 ನೇ ಸಾಲಿನಲ್ಲಿ ಸಂಗ್ರಹಿಸಿರುವ 2800 ರೂಗಳ ತೆರಿಗೆಯನ್ನು ನಿಗಧಿತ ಸಮಯಕ್ಕೆ ಜಮಾ ಮಾಡದೆ ಸರ್ಕಾರಿ ಹಣವನ್ನು ಸ್ವಂತಕ್ಕೆ ಉಪಯೋಗಿಸಿಕೊಂಡು ತಾತ್ಕಾಲಿಕ ಹಣ ದುರುಪಯೋಗ ಮಾಡಿಕೊಂಡಿರುತ್ತಾರೆ. ಕಾಮಗಾರಿ ಬಿಲ್‌ಗಳಲ್ಲಿ ತೆರಿಗೆಗಳನ್ನು ಕಟಾಯಿಸದೆ ಮತ್ತು ಕಟಾಯಿಸಿದ ಹಣವನ್ನು ಸರ್ಕಾರಕ್ಕೆ ಜಮಾ ಮಾಡದೆ ಇರುವುದು ಕಂಡುಬರುತ್ತದೆ. ಲೆಕ್ಕ ನಿರ್ವಹಣೆಯಲ್ಲಿ ನಿಯಮಾನುಸಾರ ಕಾರ್ಯನಿರ್ವಹಿಸದೆ ಕರ್ತವ್ಯಲೋಪವೆಸಗಿದ್ದಾರೆಂದು ಸಲ್ಲಿಸಿದ್ದಾರೆ.

ಸದರಿ ದೂರಿನನ್ವಯ ಎದುರುದಾರರ ವಿರುದ್ಧ ತುಮಕೂರು ಪೊಲೀಸ್ ಠಾ/ನೆಯಲ್ಲಿ ಮೊ.ಸಂ22/2014 ರಂತೆ 406, 409 ಐ.ಪಿ.ಸಿ, ಮತ್ತು ಪಿ.ಸಿ ಕಾಯ್ದೆ 1988 ಕಲಂ13(1)(ಸಿ) ಎದುರುದಾರರ ವಿರುದ್ಧ ಪ್ರ.ವ ವರದಿ ದಾಖಲಾಗಿರುತ್ತದೆ.

ದಿ:30.07.2017 ರಂದು ತನಿಖಾಧಿಕಾರಿಗಳು ಎದುರುದಾರರ ಕಛೇರಿಯ ಶೋಧನೆ ಮಾಡಲು ನ್ಯಾಯಾಲಯದಿಂದ ವಾರೆಂಟ್ ಪಡೆದು ಇಬ್ಬರ ಪಂಚರ ಸಮಕ್ಷಮ ಮುಂಜಾನೆ11:35 ಗಂಟೆಗೆ ಎದುರುದಾರರ ಕಛೇರಿಯನ್ನು ಶೋಧಿಸಿ ಅಲ್ಲಿಂದ ಕೆಲವು ರಿಜಿಸ್ಟರ್‌ಗಳನ್ನು ಜಪ್ತು ಮಾಡಿಕೊಂಡಿರುತ್ತಾರೆ. ಆ ದಿನ ರಾತ್ರಿ 9 ಗಂಟೆವರೆಗೆ ಸ್ಥಳದಲ್ಲಿ ಮಹಜಲ್ ಮಾಡಲಾಗಿರುತ್ತದೆ. ಈ ಎಲ್ಲಾ ಜಪ್ತು ಪಡಿಸಿಕೊಂಡ ದಾಖಲೆಗಳನ್ನು ಪರಿಶೀಲಿಸಲಾಗಿ ಎದುರುದಾರರು ಕರ್ತವ್ಯಲೋಪವೆಸಗಿರುತ್ತಾರೆಂದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ತನಿಖಾಧಿಕಾರಿಗಳು ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿರುತ್ತಾರೆ. ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ಸತತವಾದ ದುರ್ನಡತೆಯನ್ನು ತೋರಿಸುತ್ತದೆ. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರಿನಲ್ಲಿನ ಆಪಾದನೆಗಳನ್ನು ಅಲ್ಲಗಳೆದು ತಾನು ಯಾವುದೇ ಕರ್ತವ್ಯಲೋಪವೆಸಗಿರುವುದಿಲ್ಲ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ, ದೋಷಾರೋಪಣಾ ಪಟ್ಟಿಯನ್ನು ಪರಿಶೀಲಿಸಿದಾಗ, ಎದುರುದಾರರ ವಿರುದ್ಧ ಮೇಲ್ನೋಟಕ್ಕೆ ಪ್ರಕರಣ ಕಂಡುಬಂದಿರುತ್ತದೆ. ಈಗಾಗಲೇ ತನಿಖಾಧಿಕಾರಿಗಳು ಈ ಪ್ರಕರಣದ ಬಗ್ಗೆ ಸಂಪೂರ್ಣ ತನಿಖೆ ಮಾಡಿ ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಅದರ ಒಂದು ಪ್ರತಿಯನ್ನು ಈ ಪ್ರಕರಣದಲ್ಲಿ ಸಲ್ಲಿಸಿರುವುದರಿಂದ, ಎದುರುದಾರರು ಲಂಚ ಪಡೆದು ಕರ್ತವ್ಯದುರುಪಯೋಗ ಪಡಿಸಿಕೊಂಡಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಕಡತದಲ್ಲಿನ ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, ಎದುರುದಾರರು ಸಲ್ಲಿಸಿದ ಆಕ್ಷೇಪಣೆಗಳು ಅವರ ಮೇಲಿನ ಆಪಾದನೆಗಳನ್ನು ಅಲ್ಲಗಳೆಯಲು ಹಾಗೂ ಅವರ ವಿರುದ್ಧದ ಪ್ರಕರಣವನ್ನು ಮುಕ್ತಾಯಗೊಳಿಸಲು ಸಮಂಜಸವಾಗಿರುವುದಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಆದುದರಿಂದ, ಎದುರುದಾರರು ಸರ್ಕಾರಿ ನೌಕರರಾಗಿದ್ದು, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1) ಅಡಿಯಲ್ಲಿ ರನ್ವಯ ದುರ್ನಡತೆ/ದುರ್ವತನೆ ಕಂಡು ಬಂದಿರುವುದರಿಂದ, ಸದರಿ ಎದುರುದಾರರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಎಂದು ತಿಳಿಸಿರುತ್ತಾರೆ. ಹಾಗೂ 2ನೇ ಎದುರುದಾರರ ವಿರುದ್ಧದ ಇಲಾಖಾ ವಿಚಾರಣೆ ಮಾಡಲು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14-ಎ ರಡಿಯಲ್ಲಿ ಈ ಸಂಸ್ಥೆಗೆ ವಹಿಸಬೇಕೆಂದು ಕೋರಿದೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/438/ಗ್ರಾಪಂಕಾ/2017 ಬೆಂಗಳೂರು, ದಿನಾಂಕ:02-06-2017.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಈಶ್ವರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಊರುಕೆರೆ ಗ್ರಾಮ ಪಂಚಾಯಿತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ,</u>**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 361 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತುಮಕೂರು ತಾಲ್ಲೂಕು ಮತ್ತು ಜಿಲ್ಲೆ.
6. ಶ್ರೀ ಈಶ್ವರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಊರುಕೆರೆ ಗ್ರಾಮ ಪಂಚಾಯಿತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.